ಸಪ್ಲೈ ಪರಗೊಲ, ಆಂಪಿ ಥಿಯೇಟರ್ ಹಾಗೂ ಗ್ರಾಮದ ಅಪ್ರೋಚ್ ರಸ್ತೆಯ ಎರಡೂ ಕಡೆ ಬಾಕ್ಸ್ ಡ್ರೈನ್‌ಗಳನ್ನು ಪ್ರವಾಸೋದ್ಯಮ ಇಲಾಖೆವತಿಯಿಂದ ನಿರ್ಮಿಸಿ ಪೂರ್ಣಗೊಳಿಸಲಾಗಿದೆ. ಕೊಕ್ಕರೆ ಬೆಳ್ಳೂರು ಗ್ರಾಮಕ್ಕೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವುದು ಇಲಾಖೆಯ ವ್ಯಾಪ್ತಿಗೆ ಬರುವುದಿಲ್ಲ.

ಈ) ಗ್ರಾಮ ಆಂತರಿಕ ರಸ್ತೆ ಅಭಿವೃದ್ಧಿ ಪ್ರವಾಸೋದ್ಯಮ ಇಲಾಖೆಯ ವ್ಯಾಪ್ತಿಯಲ್ಲಿ ಬರುವುದಿಲ್ಲ.

ಉ) ಉದ್ಭವಿಸುವುದಿಲ್ಲ.

ಆಶ್ರಯ ಮನೆಗಳ ನಿರ್ಮಾಣಕ್ಕೆ ಭೂಸ್ವಾಧೀನಪಡಿಸಿಕೊಂಡಿರುವುದು

125 (117) ಶ್ರೀಮತಿ ಕಲ್ಪನಾ ಸಿದ್ದರಾಜು (ಮದ್ದೂರು): ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮದ್ದೂರು ಟೌನ್ ' ಶಿವಪುರದ ಬಳಿ ಆಶ್ರಯ ಮನೆಗಳ ನಿರ್ಮಾಣಕ್ಕಾಗಿ ಸರ್ಕಾರ ಎಷ್ಟು ಎಕರೆ ಜಮೀನನ್ನು ಭೂಸ್ವಾಧೀನಪಡಿಸಿಕೊಂಡಿದೆ;

ಆ) ಹಾಗಿದ್ದಲ್ಲಿ ಸ್ವಾಧೀನಪಡಿಸಿಕೊಂಡಿರುವ ಜಮೀನಿನಲ್ಲಿ ಎಷ್ಟು ಆಶ್ರಯ ಮನೆಗಳನ್ನು ನಿರ್ಮಾಣ ಮಾಡಲು ಮಂಜೂರಾತಿ ನೀಡಲಾಗಿದೆ ಮತ್ತು ಆಶ್ರಯ ಮನೆಗಳ ನಿರ್ಮಾಣಕ್ಕಾಗಿ ಇದುವರೆಗೂ ಸರ್ಕಾರ ಬಿಡುಗಡೆ ಮಾಡಿರುವ ಅನುದಾನದ ಮೊತ್ತವೆಷ್ಟು; (ವಿವರಗಳನ್ನು ನೀಡುವುದು)

ಇ) ಆಶ್ರಯ ಮನೆಗಳ ನಿರ್ಮಾಣಕ್ಕಾಗಿ ಗುರುತಿಸಿರುವ ಬಡಾವಣೆಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗಿದೆಯೇ;

ಈ) ಹಾಗಿದ್ದಲ್ಲಿ, ಈ ಬಡಾವಣೆಗೆ ಮೂಲಸೌಲಭ್ಯವನ್ನು ಕಲ್ಪಿಸಲು ಸರ್ಕಾರಕ್ಕಿರುನ ತೊಂದರೆಗಳೇನು;

ಉ) ಈ ಬಡಾವಣೆಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಇದುವರೆಗೂ ಎಷ್ಟು ಅನುದಾನವನ್ನು ಬಿಡುಗಡೆ ಮಾಡಿದೆ ; ಯಾವ ಯಾವ ಕಾಮಗಾರಿಗಳಿಗೆ ಎಷ್ಟೆಷ್ಟು ಹಣ ಬಿಡುಗಡೆ ಮಾಡಲಾಗಿದೆ ; (ಪೂರ್ಣ ಮಾಹಿತಿ ನೀಡುವುದು) ?

ಶ್ರೀ ವಿ. ಸೋಮಣ್ಣ (ವಸತಿ ಸಚಿವರು):

ಅ) ಮದ್ದೂರಿನ ಚಾಮನಹಳ್ಳಿ ಬಡಾವಣೆಯಲ್ಲಿ ಸರ್ವೆ ನಂ. 457, 458, 459, 460/1ಎ, 460/1ಬಿ ಮತ್ತು 461/1 ಒಟ್ಟು 7.30 ಎಕರೆ ಜಮೀನು ಭೂಸ್ವಾಧೀನಪಡಿಸಿಕೊಂಡಿದೆ.

ಆ) ಸ್ವಾಧೀನಪಡಿಸಿಕೊಂಡಿರುವ ಜಮೀನಿನಲ್ಲಿ ಒಟ್ಟು 262 ಮನೆಗಳನ್ನು ನಿರ್ಮಿಸಲು ಮಂಜೂರಾತಿ ನೀಡಲಾಗಿದೆ.

ಆಶ್ರಯ ಮನೆಗಳನ್ನು ನಿರ್ಮಿಸಲು ಇದುವರೆಗೂ ರೂ. 59.55 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.

ಇ) ಹೌದು. ಮೂಲಭೂತ ಸೌಲಭ್ಯಗಳ ಕಾಮಗಾರಿಯು ಪ್ರಗತಿಯಲ್ಲಿರುತ್ತದೆ.

ಈ) ಉದ್ಭವಿಸುವುದಿಲ್ಲ.

ಉ) ಶಿವಪುರ ಬಡಾವಣೆಗೆ ಮೂಲಭೂತ ಸೌಕರ್ಯ ಕಲ್ಪಿಸಲು ವಿವಿಧ ಕಾಮಗಾರಿಗಳ ಅಂದಾಜು ಪಟ್ಟಿಗೆ ರೂ. 54.40 ಲಕ್ಷಗಳಿಗೆ ಅನುಮೋದನೆ ದೊರೆತಿದ್ದು, ಇದುವರೆಗೂ ರೂ. 36.63 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದ್ದು, ಕಾಮಗಾರಿಗಳು ಪ್ರಗತಿಯಲ್ಲಿರುತ್ತದೆ.

ವಿವರಗಳು ಈ ಕೆಳಗಿನಂತಿದೆ.

ರೂ. ಲಕ್ಷಗಳಲ್ಲಿ

ಅಂದಾಜು ಪಟ್ಟಿಯ ಅನುಮೋದಿತ ಮೊತ್ತ						ಬಿಡುಗಡೆ ಮಾಡಲಾದ ಮೊತ್ತ
ನೀರು ಸರಬರಾಜು	ವಿದ್ಯುತ್‌ಚ್ಛಕ್ತಿ	ರಸ್ತೆ	ಕಲ್ವರ್ಟ್	ಚರಂಡಿ	ಒಟ್ಟು	
5.25	9.59	8.60	2.77	28.19	54.40	36.63

ರಾಜ್ಯದಲ್ಲಿನ ಐ.ಎ.ಎಸ್., ಐ.ಪಿ.ಎಸ್. ಮತ್ತು ಕೆ.ಎ.ಎಸ್. ಅಧಿಕಾರಿಗಳ ವಿವರ ಒದಗಿಸುವುದು

126 (381) ಶ್ರೀ ಯು.ಟಿ. ಖಾದರ್ (ಮಂಗಳೂರು): ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಐ.ಎ.ಎಸ್., ಮತ್ತು ಐ.ಪಿ.ಎಸ್. ವೃಂದದ ಅಧಿಕಾರಿಗಳ ಸಂಖ್ಯೆ ಎಷ್ಟು ; (ವಿವರ ಒದಗಿಸುವುದು)

ಆ) ಕರ್ನಾಟಕ ಆಡಳಿತ ಸೇವೆ (ಕೆ.ಎ.ಎಸ್.)ಯ ಅಧಿಕಾರಿಗಳಿಗೆ ಮುಂಬಡ್ತಿ ನೀಡುವ ಮೂಲಕ ಈ ಹುದ್ದೆಗಳನ್ನು ಎಷ್ಟು ಪ್ರಮಾಣದಲ್ಲಿ ತುಂಬಲಾಗುತ್ತಿದೆ.;

ಇ) ಕಳೆದ 3 ವರ್ಷಗಳಿಂದ ಎಷ್ಟು ಅಧಿಕಾರಿಗಳನ್ನು ಮುಂಬಡ್ತಿ ಮೂಲಕ ಈ ಹುದ್ದೆಗೆ ಭರ್ತಿ ಮಾಡಲಾಗಿದೆ ; (ವಿವರ ಒದಗಿಸುವುದು)?